# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂ.174-ಹೆಚ್.ಎಸ್.ಆರ್ ಬಡಾವಣೆ, ವಾರ್ಡ್ ಸಮಿತಿ ಸಭೆಯ ನಡಾವಳಿಗಳು

ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ/ಜಂಟಿ ಆಯುಕ್ತರು (ಮಹದೇವಪುರ) ರವರು ದಿನಾಂಕ: 19.04.2021 ರಂದು ಬೆಳಿಗ್ಗೆ 11.00 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಂ.174 ಹೆಚ್.ಎಸ್.ಆರ್ ಕಛೇರಿಯಲ್ಲಿ ನಡೆಸಿದ್ದು, ಸಭೆಯ ನಡವಳಿ ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಹಾಜರಿದ್ದ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ, ಕಾರ್ಯದರ್ಶಿ, ಸದ್ಯಸರುಗಳು, ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು | |
|---|---|
| 1 | ಶ್ರೀ ಆರ್. ವೆಂಕಟಚಾಲಪತಿ ಕ.ಆ.ಸೇ, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ ವಾರ್ಡ್.ನಂ.174 ಹೆಚ್.ಎಸ್.ಆರ್ ಬಡಾವಣೆ ಹಾಗೂ ಜಂಟಿ ಆಯುಕ್ತರು (ಮಹದೇವಪುರ) ವಲಯ |
| 2 | ಶ್ರೀ ಕೆ.ಎಸ್, ರಾಮೇಗೌಡ, ಕಾರ್ಯದರ್ಶಿ, ಸಹಾಯಕ ಅಭಿಯಂತರರು. ವಾರ್ಡ್.ನಂ.174 ಹೆಚ್.ಎಸ್.ಆರ್ ಬಡಾವಣೆ. |
| 3 | ಶ್ರೀ ಚಂದ್ರಶೇಖರ ಹೆಚ್.ಇ. ಆರ್.ಡಬ್ಲ್ಯೂ.ಎ/ ಸದಸ್ಯರು |
| 4 | ಶ್ರೀ ಬಿ.ಎಸ್.ಆರ್ ರೆಡ್ಡಿ ಆರ್.ಡಬ್ಲ್ಯೂ.ಎ/ಸದಸ್ಯರು |
| 5 | ಶ್ರೀ ಹನುಮಂತರಾಯ.ಟಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಚ್.ಎಸ್.ಆರ್ ಉಪವಿಭಾಗ/ಬೃಹತ್ ನೀರುಗಾಲುವೆ |
| 6 | ಶ್ರೀ ಡಾ॥ ಮೊಹಮ್ಮದ್ ಅಬ್ಬಾಸ್, ಪಶುಸಂಗೋಪನೆ ಇಲಾಖೆ, ಬೊಮ್ಮನಹಳ್ಳಿ ವಲಯ |
| 7 | ಶ್ರೀ ಮಹೇಶ್ ಜೆ.ಆರ್. ಅರಣ್ಯ ವಲಯ ಅಧಿಕಾರಿ, ಬೊಮ್ಮನಹಳ್ಳಿ ವಲಯ |
| 8 | ಶ್ರೀಮತಿ ಸತ್ಯವಾಣಿ, ಕೆ.ಆ.ಪ. ವಾರ್ಡ್ ಸಂ. 174 |
| 9 | ಶ್ರೀ ಮದನ್ ಬಿ.ಎಂ ಮಾರ್ಷಲ್, ವಾರ್ಡ್ ಸಂ. 174 |
| 10 | ಶ್ರೀ ರಾಮಸ್ವಾಮಿ. ಎಸ್ ಬಿ.ಡಬ್ಲ್ಯೂ.ಎಸ್.ಎಸ್.ಬಿ ವಾಟರ್ ಇನ್ಸ್‌ಪೆಕ್ಟರ್ |
| 11 | ಶ್ರೀ ನರಸಪ್ಪ, ತೋಟಗಾರಿಕೆ ನೀರಿಕ್ಷಕರು, ಬೊಮ್ಮನಹಳ್ಳಿ ವಲಯ |
| 12 | ಶ್ರೀ ಮಹೇಶ್ ಯಾದವ್ ಬೀದಿ ದೀಪ ನಿರ್ವಹಕರು (ವಿದ್ಯುತ್ ವಿಭಾಗ) |

ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ ಹಾಗೂ ಹಾಜರಿದ್ದ ಸದ್ಯಸರುಗಳ ರವರ ಸಮ್ಮುಖದಲ್ಲಿ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ/ಸಿಬ್ಬಂದಿ ಹಾಗೂ ಸಂಘ ಸಂಸ್ಥೆಗಳ ಪದಾಧಿಕಾರಿಗಳಿಗೆ ಮತ್ತು ಸಾರ್ವಜನಿಕರಿಗೆ ಸ್ವಾಗತ ಕೋರುತ್ತಾ, ಸಭೆಯನ್ನು ಪ್ರಾರಂಭಿಸಲಾಯಿತು.



Scanned with

| ಕ್ರ.ಸಂ | ಇಲಾಖೆ | ವಿಷಯ |
|---|---|---|
| 1 | ಬಿ.ಡಬ್ಲ್ಯೂ.ಎಸ್.ಎಸ್.ಬಿ | • ಹಿಂದಿನ ಸಭೆಯಲ್ಲಿ ಚರ್ಚಿಸಿರುವ ವಿಷಯದ ಬಗ್ಗೆ ಪ್ರಾಸ್ತಾಪಿಸಲಾಗಿದ್ದು, ಕುಡಿಯುವ ನೀರಿನ ವ್ಯವಸ್ಥೆಯನ್ನು 4 ದಿನಕ್ಕೆ ಒಂದು ಬಾರಿ ನೀಡಲಾಗುತ್ತಿದ್ದು, ಸೆಕ್ಟರ್‌ವಾರು ನಿಗಧಿಪಡಿಕೊಂಡಿರುವ ಪಟ್ಟಿಯನ್ನು ಸಾರ್ವಜನಿಕರಿಗೆ ಪ್ರಕಟವಾಗುವಂತೆ ಒದಗಿಸಲು ವಾರ್ಡ್ ಸದಸ್ಯರು ಕೋರಿರುತ್ತಾರೆ.<br>ಈ ಬಗ್ಗೆ ಮುಂದಿನ ಸಭೆಯಲ್ಲಿ ತಯಾರಿಸಿರುವ ಪಟ್ಟಿಯನ್ನು ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ಸಹಾಯಕ ಅಭಿಯಂತರರು ವರದಿಯೊಂದಿಗೆ ಹಾಜರಾಗುವಂತೆ ಅಧ್ಯಕ್ಷರು/ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.<br>**ಕ್ರಮ: ಸ.ಕಾ.ಅ. ಮತ್ತು ಸ.ಅ. ಬಿ.ಡಬ್ಲ್ಯೂ.ಎಸ್.ಎಸ್.ಬಿ** |
| 2 | ವಿದ್ಯುತ್ ವಿಭಾಗ | • ವಾರ್ಡ್ ವ್ಯಾಪ್ತಿಯಲ್ಲಿ ಬೀದಿದೀಪಗಳಿಗೆ ಕಂಬಗಳಲ್ಲಿ ಅಳವಡಿಸಿರುವ ವೈರ್‌ಗಳನ್ನು ಹಾಗೆ ಬಿಟ್ಟಿದ್ದು, ಟೈಮರ್ ಸ್ವಿಚ್ ಅಳವಡಿಸಲು ಮತ್ತು ಜಾಸ್ತಿ ಇರುವುದರಿಂದ ಹೊಸದಾಗಿ ಬೀದಿ ದೀಪ ಅಳಡಿಸಲು ಸದಸ್ಯರು ಕೋರಿರುತ್ತಾರೆ.<br>ಈ ಬಗ್ಗೆ ಅಧ್ಯಕ್ಷರು/ನೋಡಲ್ ಅಧಿಕಾರಿರವರುಕ್ರಮ ವಹಿಸುವಂತೆ ಸೂಚಿಸಿರುತ್ತಾರೆ.<br>**ಕ್ರಮ : ಸಹಾಯಕ ಅಭಿಯಂತರರು, ವಿದ್ಯುತ್ ವಿಭಾಗ** |
| 3 | ಬೆಸ್ಕಾಂ | • ಹಿಂದಿನ ಎಲ್ಲಾ ಸಭೆಗಳಲ್ಲಿ ಪ್ರಸ್ತಾಪಿಸಿಸಿರುವ ವಿಷಯಗಳ ಬಗ್ಗೆ ಚರ್ಚಿಸಿರುವಂತೆ, ಇಂದಿನ ಸಭೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು & ಸಹಾಯಕ ಅಭಿಯಂತರರು ಗೈರು ಹಾಜರಾಗಿದ್ದು, ಮೊಬೈಲ್ ಟವರ್‌ವನ್ನು ಅನಧಿಕೃತವಾಗಿ ಅಳವಡಿಸಿರುವುದನ್ನು ಇದುವರೆಗೂ ತೆರವುಗೊಳಿಸಿರುವುದಿಲ್ಲವೆಂದು ಸದಸ್ಯರು ತೀವ್ರ ಆಕ್ಷೇಪ ವ್ಯಕ್ತಪಡಿಸಿರುತ್ತಾರೆ.<br>• ರಸ್ತೆ ಬದಿಗಳಲ್ಲಿ ನೇತಾಡುತ್ತಿರುವ ಕೇಬಲ್‌ಗಳನ್ನು ತೆರವುಗೊಳಿಸುವಂತೆ ಸದಸ್ಯರು ಕೋರಿರುತ್ತಾರೆ.<br>ಈ ಬಗ್ಗೆ ಮುಂದಿನ ಸಭೆಯಲ್ಲಿ ಸ.ಕಾ.ಅ & ಸ.ಅ ರವರಿಗೆ ಹಾಜರಾಗುವಂತೆ ಕಾರ್ಯದರ್ಶಿ ರವರಿಗೆ ಅಧ್ಯಕರು/ನೋಡಲ್ ಅಧಿಕಾರಿರವರು ಸೂಚಿಸಿರುತ್ತಾರೆ.<br>**ಕ್ರಮ: ಸಹಾಯಕ ಅಭಿಯಂತರರು, ಬೆಸ್ಕಾಂ** |
| 4 | ಘನತ್ಯಾಜ್ಯ ನಿರ್ವಹಣೆ | ನೋವೆಲ್ ಕೋವಿಡ್-19 ಸಾಂಕ್ರಾಮಿಕ ರೋಗದ 2ನೇ ಅಲೆ ಹೆಚ್ಚಾಗುತ್ತಿದ್ದು, ವಾರ್ಡ್ ವ್ಯಾಪ್ತಿಯ ರಸ್ತೆ ಬದಿ ಮತ್ತು ಪಾದಚಾರಿ ಮಾರ್ಗಗಳಲ್ಲಿ ಇರುವ ತಳ್ಳುವಗಾಡಿ ಮತ್ತು ಬೀದಿ ವ್ಯಾಪರವನ್ನು ತೆರವುಗೊಳಿಸುವಂತೆ ಸದಸ್ಯರು ಕೋರಿರುತ್ತಾರೆ.<br>ಈ ಬಗ್ಗೆ ಸಂಬಂಧಪಟ್ಟ ಹಿ.ಆ.ಪ./ಕಿ.ಆ.ಪ ರವರಿಗೆ ಕ್ರಮ ವಹಿಸುವಂತೆ ಅಧ್ಯಕರು/ನೋಡಲ್ ಅಧಿಕಾರಿರವರು ಸೂಚಿಸಿರುತ್ತಾರೆ.<br>**ಕ್ರಮ: ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು** |

ಅಂತಿಮವಾಗಿ ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ ರವರು, ವಾರ್ಡ್ ನಂ. 174 ಹಾಗೂ ಜಂಟಿ ಆಯುಕ್ತರು (ಮಹಾದೇವಪುರ) ವಲಯ ರವರು ಸಭೆಯಲ್ಲಿ ಚರ್ಚಿಸಲಾದ ಎಲ್ಲಾ ವಿಷಯಗಳ ಬಗ್ಗೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿ ರವರು ತುರ್ತು ಕ್ರಮವಹಿಸಲು ಸೂಚಿಸಿದರು ಹಾಗೂ ಸಾರ್ವಜನಿಕರು ನೀಡಿರುವ ದೂರಿನ ಬಗ್ಗೆ ಅಗತ್ಯ ಕ್ರಮವಹಿಸುವುದಾಗಿ ತಿಳಿಸುತ್ತಾ ಸಭೆಯಲ್ಲಿ ಹಾಜರಿದ್ದ ಎಲ್ಲಾರಿಗೂ ವಂದನೆಗಳನ್ನು ಸಲ್ಲಿಸುವುದರ ಮೂಲಕ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
ಸಹಾಯಕ ಅಭಿಯಂತರು
ಹೆಚ್.ಎಸ್.ಆರ್.ಬಡಾವಣೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು/ನೋಡಲ್ ಅಧಿಕಾರಿ ವಾರ್ಡ್ ನಂ.174
ಹೆಚ್.ಎಸ್.ಆರ್.ಬಡಾವಣೆ ಹಾಗೂ
ಜಂಟಿ ಆಯುಕ್ತರು ಮಹದೇವಪುರ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned with